ದಿನಾಂಕ 27/8/24

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಆಯುರ್ವೇದ, ಯುನಾನಿ, ಹೋಮಿಯೋಪತಿ ಹಾಗೂ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ಪದ್ಧತಿಯ ವೈದ್ಯಕೀಯ ಮಹಾವಿದ್ಯಾಲಯಗಳ ಪದವಿ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಿಗೆ ಸೀಟು ಹಂಚಿಕೆ ಅನುಪಾತ ಮತ್ತು ಶುಲ್ಕ ನಿಗದಿಪಡಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಆಕುಕ 132 ಪಿಐಎಂ 2023, ದಿನಾಂಕ:14.09.2023.
2. ಶುಲ್ಕ ನಿಯಂತ್ರಣ ಸಮಿತಿಯ ನಡವಳಿ ದಿನಾಂಕ: 28.03.2024.
3. ಆಯುಕ್ತರು, ಆಯುಷ್ ಇಲಾಖೆ ಇವರ ಪತ್ರ ಸಂಖ್ಯೆ: ಆಯುಷ್/02/ವೈಶಿ(2)/2024-25, ದಿನಾಂಕ: 06.05.2024 ಮತ್ತು 07.05.2024.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ. (1)ರ ಸರ್ಕಾರದ ಆದೇಶದಲ್ಲಿ, 2023-24ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ ಮತ್ತು ಅನುದಾನ ರಹಿತ, ಖಾಸಗಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ, ಹೋಮಿಯೋಪತಿ, ಆಯುರ್ವೇದ ಹಾಗೂ ಯುನಾನಿ ಮಹಾವಿದ್ಯಾಲಯಗಳಲ್ಲಿನ ಪದವಿ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಿಗೆ ಸೀಟು ಹಂಚಿಕೆ ಅನುಪಾತ ಮತ್ತು ವಾರ್ಷಿಕ ಶುಲ್ಕವನ್ನು ನಿಗದಿಪಡಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ. (2)ರ ದಿನಾಂಕ: 28.03.2024 ರಂದು ನಡೆದ ಶುಲ್ಕ ನಿಯಂತ್ರಣ ಸಮಿತಿಯ (Fee Regulatory Committee) ಸಭೆಯ ನಡವಳಿಯಲ್ಲಿ, 2023-24ನೇ ಸಾಲಿನ ಶುಲ್ಕವನ್ನೇ 2024-25ನೇ ಸಾಲಿಗೆ ಮುಂದುವರೆಸಿ, Consensual agreement ಮೂಲಕ ಶುಲ್ಕ ನಿಗದಿಪಡಿಸಲು ಪರಿಗಣಿಸಬಹುದಾಗಿದೆ ಎಂದು ನಿರ್ಧರಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ. (3)ರ ಪತ್ರಗಳಲ್ಲಿ, ಆಯುಕ್ತರು, ಆಯುಷ್ ಇಲಾಖೆ ಇವರು ಕರ್ನಾಟಕ ರಾಜ್ಯ ಆಯುರ್ವೇದಿಕ್ ಮೆಡಿಕಲ್ ಕಾಲೇಜುಗಳ ಫೆಡರೇಷನ್ (ರಿ) ಹಾಗೂ ಕರ್ನಾಟಕ ಖಾಸಗಿ ಯೋಗ ಮತ್ತು ನ್ಯಾಚುರೋಪತಿ ಕಾಲೇಜುಗಳ ಮ್ಯಾನೇಜ್‌ಮೆಂಟ್ ಫೆಡರೇಷನ್ (ರಿ) ಇವರುಗಳು 2023-24ನೇ ಶೈಕ್ಷಣಿಕ ಸಾಲಿಗೆ ನಿಗದಿಪಡಿಸಿರುವ ಸೀಟು ಹಂಚಿಕೆ ಅನುಪಾತ ಮತ್ತು ಶುಲ್ಕವನ್ನು 2024-25ನೇ ಸಾಲಿಗೆ ಮುಂದುವರೆಸಲು ಕೋರಿರುತ್ತಾರೆ.

ಮುಂದುವರೆದು, ಕರ್ನಾಟಕ ಖಾಸಗಿ ಹೋಮಿಯೋಪತಿ ವೈದ್ಯಕೀಯ ಕಾಲೇಜುಗಳ ಮ್ಯಾನೇಜ್ ಮೆಂಟ್ ಫೆಡರೇಷನ್ (ರಿ), ಇವರು ರಾಜ್ಯದ ಸರ್ಕಾರಿ ಮತ್ತು ಅನುದಾನ ರಹಿತ ಖಾಸಗಿ ವೈದ್ಯಕೀಯ ಮಹಾವಿದ್ಯಾಲಯಗಳ ಪದವಿ ಮತ್ತು ಖಾಸಗಿ ಮಹಾವಿದ್ಯಾಲಯಗಳಲ್ಲಿನ ಸ್ನಾತ್ತಕೋತ್ತರ ಕೋರ್ಸ್‌ಗಳಿಗೆ ಸೀಟು ಹಂಚಿಕೆಯ ಅನುಪಾತ ಮತ್ತು ಶುಲ್ಕ ನಿಗದಿಗೆ ಸಂಬಂಧಿಸಿದಂತೆ 2023-24ನೇ ಶೈಕ್ಷಣಿಕ ಸಾಲಿಗೆ ಪದವಿ ಮತ್ತು ಸ್ನಾತಕೋತ್ತರ ಪದವಿಯ ಸರ್ಕಾರಿ ಕೋಟಾ ಸೀಟುಗಳ ಶುಲ್ಕವನ್ನು ಯಥಾವತ್ತಾಗಿ ಮುಂದುವರೆಸಲು ಹಾಗೂ ಉಳಿದ ಕೋಟಾ ಸೀಟುಗಳ ಶುಲ್ಕವನ್ನು ಕಡಿಮೆ ಮಾಡಿ 2024-25ನೇ ಸಾಲಿಗೆ Consensual agreement ಮಾಡಿಕೊಳ್ಳಲು ಕೋರಿರುತ್ತಾರೆ.

...2

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಆಯುರ್ವೇದಿಕ್, ಯುನಾನಿ ಹಾಗೂ ಯೋಗ ಮತ್ತು ನ್ಯಾಚುರೋಪತಿ ಕಾಲೇಜುಗಳ ಮ್ಯಾನೇಜ್‌ಮೆಂಟ್ ಫೆಡರೇಷನ್ ಇವರುಗಳು ಸೀಟು ಹಂಚಿಕೆ ಅನುಪಾತ ಮತ್ತು ಶುಲ್ಕವನ್ನು ಹೆಚ್ಚಿಸುವ ಬಗ್ಗೆ ಯಾವುದೇ ಪ್ರಸ್ತಾಪ ಮಾಡದೇ ಇರುವುದರಿಂದ ಹಾಗೂ ಹೋಮಿಯೋಪತಿ ಕಾಲೇಜುಗಳ ಮ್ಯಾನೇಜ್‌ಮೆಂಟ್ ಫೆಡರೇಷನ್ ಇವರು ಸಹ BHMS ಹಾಗೂ M.D. (Hom) Course ಗಳ ರಾಜ್ಯ ಸರ್ಕಾರಿ ಕೋಟಾಗೆ ಸಂಬಂಧಿಸಿದಂತೆ, 2023-24ನೇ ಸಾಲಿನ ಸೀಟು ಹಂಚಿಕೆ ಅನುಪಾತ ಹಾಗೂ ಶುಲ್ಕವನ್ನು ಯಥಾವತ್ತಾಗಿ ಮುಂದುವರೆಸಲು, ಉಳಿದಂತೆ, BHMS ಹಾಗೂ M.D. (Hom) Course ಗಳ ವಿವಿಧ ಕೋಟಾಗಳ ಶುಲ್ಕವನ್ನು ಕಡಿಮೆ ಮಾಡಲು ಕೋರಿರುವುದನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 258 ಪಿಐಎಂ 2024, ಬೆಂಗಳೂರು,**
**ದಿನಾಂಕ:22.08.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆಯುರ್ವೇದ, ಯುನಾನಿ ಹಾಗೂ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಪದ್ಧತಿಯಲ್ಲಿನ ರಾಜ್ಯದ ಸರ್ಕಾರಿ ಮತ್ತು ಅನುದಾನ ರಹಿತ ಖಾಸಗಿ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿನ ಪದವಿ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಿಗೆ 2023-24ನೇ ಶೈಕ್ಷಣಿಕ ಸಾಲಿಗೆ ನಿಗದಿಪಡಿಸಿದ ಸೀಟು ಹಂಚಿಕೆಯ ಅನುಪಾತ ಮತ್ತು ಶುಲ್ಕವನ್ನು 2024-25ನೇ ಸಾಲಿಗೆ ಯಥಾವತ್ತಾಗಿ ಮುಂದುವರೆಸಿ ಆದೇಶಿಸಿದೆ.

ಮುಂದುವರೆದು, ರಾಜ್ಯದ ಸರ್ಕಾರಿ ಮತ್ತು ಅನುದಾನ ರಹಿತ ಖಾಸಗಿ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯಗಳ ಪದವಿ ಮತ್ತು ಸ್ನಾತಕೋತ್ತರ ಕೋರ್ಸ್‌ಗಳ ಸರ್ಕಾರಿ ಕೋಟಾ ಸೀಟುಗಳಿಗೆ ಸಂಬಂಧಿಸಿದಂತೆ, 2023-24ನೇ ಶೈಕ್ಷಣಿಕ ಸಾಲಿಗೆ ನಿಗದಿಪಡಿಸಿದ ಸೀಟು ಹಂಚಿಕೆಯ ಅನುಪಾತ ಮತ್ತು ಶುಲ್ಕವನ್ನು 2024-25ನೇ ಸಾಲಿಗೆ ಯಥಾವತ್ತಾಗಿ ಮುಂದುವರೆಸಿದೆ. ಆದರೆ, ಅನುದಾನರಹಿತ ಖಾಸಗಿ ಹೋಮಿಯೋಪತಿ ಮಹಾವಿದ್ಯಾಲಯಗಳಿಗೆ ಸಂಬಂಧಿಸಿದ ಈ ಕೆಳಕಂಡ ಕೋಟಾ ಸೀಟುಗಳ ಶುಲ್ಕವನ್ನು ಮಾತ್ರ ಈ ಕೆಳಗೆ ನಮೂದಿಸಿರುವಂತೆ ಕಡಿಮೆ ಮಾಡಿ ಆದೇಶಿಸಿದೆ:-

**BHMS Course:**

| Seat Category | Percentage of seats | Existing Fees for 2023-24 | Proposed Fees for 2024-25 |
|---|---|---|---|
| All India Quota | 15% | Rs.2,30,000.00 | Rs.2,25,000.00 |
| Management Quota | 40% | Rs.3,50,000.00 | Rs.2,50,000.00 |
| Management/NRI Quota | 20% | Rs.3,50,000.00 | Rs.2,50,000.00 |

**M.D. (Hom) Courses:**

| Seat Category | Percentage of seats | Existing Fees for 2023-24 | Proposed Fees for 2024-25 |
|---|---|---|---|
| All India Quota | 15% | Rs.4,00,000.00 | Rs.2,50,000.00 |
| Management Quota | 40% | Rs.4,50,000.00 | Rs.2,75,000.00 |
| Management/NRI Quota | 20% | Rs.4,50,000.00 | Rs.2,75,000.00 |

ಖಾಸಗಿ ಆಡಳಿತ ಮಂಡಳಿಯವರು ಸರ್ಕಾರ ನಿಗದಿಪಡಿಸಿದ ಗರಿಷ್ಠ ವಾರ್ಷಿಕ ಶುಲ್ಕದ ಮೊತ್ತಕ್ಕಿಂತ ಹೆಚ್ಚಿಗೆ ಪಡೆಯುವಂತಿಲ್ಲ.

...3

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು NCISM ಹಾಗೂ NCH ಹೊರಡಿಸಿರುವ ಮಾರ್ಗಸೂಚಿ ಹಾಗೂ ವೇಳಾ ಪಟ್ಟಿಗಳನುಸಾರ ಕೌನ್ಸಿಲಿಂಗ್ ನಡೆಸುವುದು.

ಆಯುರ್ವೇದ, ಯುನಾನಿ ಮತ್ತು ಹೋಮಿಯೋಪತಿ ಕೋರ್ಸುಗಳಿಗೆ ಸಂಬಂಧಿಸಿದಂತೆ NRI/ಆಡಳಿತ ಮಂಡಳಿ ಕೋಟಾ ಸೀಟುಗಳನ್ನು NRI ಅಭ್ಯರ್ಥಿಗಳಿಗೆ 2 ಸುತ್ತಿನ ಕೌನ್ಸೆಲಿಂಗ್ ನಡೆಸಿದ ಬಳಿಕ, ಉಳಿಕೆ ಸೀಟುಗಳನ್ನು ಅದೇ NRI ಶುಲ್ಕದಲ್ಲೇ ಆಡಳಿತ ಮಂಡಳಿ ಕೋಟಾದಡಿಯಲ್ಲಿಲಿ ಕೆ.ಇ.ಎ. ಮೂಲಕ ಹಂಚಿಕೆ ಮಾಡತಕ್ಕದ್ದು.

ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಮಹಾವಿದ್ಯಾಲಯಗಳಿಗೆ 20% ಆಡಳಿತ ಮಂಡಳಿಯ ಕೋಟಾ ಸೀಟುಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ 2ನೇ ಸುತ್ತಿನ ಕೌನ್ಸೆಲಿಂಗ್ ಬಳಿಕ ಉಳಿಕೆ ಸೀಟುಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಆಡಳಿತ ಮಂಡಳಿಗಳಿಗೆ ಬಿಟ್ಟುಕೊಡತಕ್ಕದ್ದು.

ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಮಹಾವಿದ್ಯಾಲಯಗಳ ಪದವಿ ಕೋರ್ಸ್ 60% ಮತ್ತು ಸ್ನಾತಕೋತ್ತರ ಕೋರ್ಸ್ 75% NRI ಮತ್ತು ಆಡಳಿತ ಮಂಡಳಿ ಕೋಟಾ ಸೀಟುಗಳನ್ನು ಆಡಳಿತ ಮಂಡಳಿಗಳೇ ಭರ್ತಿ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶ್ರೀಪತಿ ಪಿ.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾವೈಪ ಮತ್ತು ಸಮನ್ವಯ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ/ಇ&ಆರ್. ಎಸ್.ಇ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು-560 001.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಅಂಚೆಪಟ್ಟಿಗೆ ಸಂಖ್ಯೆ: 5329, 560 001.
3. ಆಯುಕ್ತರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು.
4. ಕುಲಸಚಿವರು, ರಾಜೀವ್ ಗಾಂಧೀ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು.
5. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
6. ಸಂಬಂಧಪಟ್ಟ ಮಹಾವಿದ್ಯಾಲಯಗಳಿಗೆ, (ಆಯುಕ್ತರು, ಆಯುಷ್ ಇಲಾಖೆ ಇವರ ಮುಖಾಂತರ).
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಸಂಖ್ಯೆ : ಆಯುಷ್/05/ವೈ.ಶಿ(2)/204-25

ಆಯುಷ್ ನಿರ್ದೇಶನಾಲಯ
ಧನ್ವಂತರ ರಸ್ತೆ,
ಬೆಂಗಳೂರು, ದಿನಾಂಕ: 30-08-2024.

ಸರ್ಕಾರದ ಆದೇಶ ಸಂಖ್ಯೆ: ಆಕುಕ 258 ಪಿಟಿಡಿ 2024, ಬೆಂಗಳೂರು, ದಿನಾಂಕ: 22-08-2024ರನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.

ಜಂಟಿ ನಿರ್ದೇಶಕರು
ಜಂಟಿ ನಿರ್ದೇಶಕರು (ಆಯುಷ್)
(ವೈದ್ಯಕೀಯ ಶಿಕ್ಷಣ)
ಆಯುಷ್ ನಿರ್ದೇಶನಾಲಯ
ಧನ್ವಂತರಿ ರಸ್ತೆ, ಬೆಂಗಳೂರು-09

ಇವರಿಗೆ,

1. ಪ್ರಾಚಾರ್ಯರು, ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತ ಖಾಸಗಿ ಆಯುರ್ವೇದ, ಯುನಾನಿ, ಪ್ರಕೃತಿ ಚಿಕಿತ್ಸೆ ಮತ್ತು ಯೋಗ, ಹಾಗೂ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯಗಳು, ಕರ್ನಾಟಕ.
2. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.